ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 110 ಉಖಾಯೋ 2009.

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 22.09.2010.

ಗೆ,

ಎಲ್ಲಾ ಜಿಲ್ಲಾ ಪಂಚಾಯತಿಗಳ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.

ಮಾನ್ಯರೆ,

**ವಿಷಯ:- ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಕೈಗೊಳ್ಳುವ ಕಾಮಗಾರಿಗಳ ತಪಾಸಣೆ ನಡೆಸುವ ಕುರಿತು**

-::::-

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಕೈಗೊಳ್ಳುವ ಕಾಮಗಾರಿಗಳ ತಪಾಸಣೆ ನಡೆಸುವ ಕುರಿತು ಭಾರತ ಸರ್ಕಾರದ ಕಾರ್ಯಾಚರಣೆ ಕೈಪಿಡಿ (Operation Manual) ಕಂಡಿಕೆ 10.3.1 ರಲ್ಲಿ ತಿಳಿಸಿರುವಂತೆ ಶೇಕಡ 100 ರಷ್ಟು ಕಾಮಗಾರಿಗಳನ್ನು ತಾಲ್ಲೂಕು ಪಂಚಾಯಿತಿಯ ಅನುಷ್ಠಾನಾಧಿಕಾರಿಗಳು ಹಾಗೂ ಶೇಕಡ 10 ರಷ್ಟು ಕಾಮಗಾರಿಗಳನ್ನು ಜಿಲ್ಲಾ ಮಟ್ಟದ ಅಧಿಕಾರಿಗಳು, ಶೇಕಡ 2 ರಷ್ಟು ಕಾಮಗಾರಿಗಳನ್ನು ರಾಜ್ಯ ಮಟ್ಟದ ಅಧಿಕಾರಿಗಳು ತಪಾಸಣೆ ಕೈಗೊಳ್ಳಬೇಕಾಗುತ್ತದೆ.

ಆದರೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಇತರೆ ಜಿಲ್ಲಾ ಮಟ್ಟದ ಅಧಿಕಾರಿಗಳ ದಿನಚರಿ ಹಾಗೂ ಇತ್ಯಾದಿ ವಿವರಗಳನ್ನು ಪರಿಶೀಲಿಸಿದಾಗ ಅನೇಕ ಅಧಿಕಾರಿಗಳು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಮಾರ್ಗಸೂಚಿಗಳನ್ವಯ ಕೈಗೊಳ್ಳಬೇಕಾದಂತಹ ಪ್ರಮಾಣದಲ್ಲಿ ಕಾಮಗಾರಿಗಳ ತಪಾಸಣೆ ಕೈಗೊಳ್ಳದೆ ಇರುವುದು ಕಂಡುಬಂದಿರುತ್ತದೆ. ಇದರಿಂದ ಕ್ಷೇತ್ರಮಟ್ಟದಲ್ಲಿ ಅನೇಕ ನ್ಯೂನತೆಗಳು ಹೇರಳವಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಆದ್ದರಿಂದ ಮಾರ್ಗಸೂಚಿಯಲ್ಲಿ ನಿಗದಿಪಡಿಸಿದ ತಪಾಸಣೆಗಳನ್ನು ಕಾಲಕಾಲಕ್ಕೆ ಕೈಗೊಂಡು, ಪ್ರತಿ ತಿಂಗಳು ತಾಲ್ಲೂಕು ಮಟ್ಟದ ಅಧಿಕಾರಿಗಳು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಕೈಗೊಂಡ ತಪಾಸಣೆ ವಿವರವನ್ನು ಜಿಲ್ಲಾ ಪಂಚಾಯಿತಿ ನಿಗದಿ ಪಡಿಸಿದ ನಮೂನೆಯಲ್ಲಿ ನಿರ್ವಹಿಸಿ, ಹಿರಿಯ ಅಧಿಕಾರಿಗಳು ತಪಾಸಣೆಗೆ ಬಂದಾಗ ಹಾಜರು ಪಡಿಸಲು ಈ ಮೂಲಕ ತಿಳಿಸಲಾಗಿದೆ.

ತಮ್ಮ ನಂಬುಗೆಯ,

(ವಿ. ರವಿಕುಮಾರ್)
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಜಿಲ್ಲಾ ಪಂಚಾಯತ್ ಕಾರ್ಯಾಲಯ
ಉತ್ತರ ಕನ್ನಡ ಕಾರವಾರ
11 OCT 2010
ದಿನಾಂಕ ವಿಷಯ
ಅಧಿ. ಮು.ಕಾ.